ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ
Government of Karnataka
Department of Collegiate Education
NO. 1, 2nd Floor, DTE Building, Palace Road, Bangalore - 560 001; Phone: 080 22263327; email: bngcce@kar.nic.in

ಸಂಖ್ಯೆ: ಕಾಶಿಇ/ಶೈವಿ/26/ICICI/2018-19

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು, ದಿನಾಂಕ: 24.09.2018

# ಅಧಿಕೃತ ಜ್ಞಾಪನ

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ICICI Academy for skills ಸಂಸ್ಥೆಯ ಕೌಶಲ್ಯ ತರಬೇತಿಯನ್ನು ವಿದ್ಯಾರ್ಥಿಗಳಿಗೆ ಒದಗಿಸುವ ಬಗ್ಗೆ.

ಉಲ್ಲೇಖ: ಐ.ಸಿ.ಐ.ಸಿ.ಐ. ಫೌಂಡೇಷನ್ ಪತ್ರ ದಿನಾಂಕ: 13.08.2018.

----

ಕೌಶಲ್ಯಗಳನ್ನು ಹೆಚ್ಚಿಸುವ ಉದ್ದೇಶದಿಂದ ICICI ಸಂಸ್ಥೆಯು "ICICI Academy for Skills" ಎಂಬ ರಾಷ್ಟ್ರಮಟ್ಟದ ಕೌಶಲ್ಯ ಅಭಿವೃದ್ಧಿ ಸಂಸ್ಥೆಯನ್ನು ಅಕ್ಟೋಬರ್, 2013ರಲ್ಲಿ ಸ್ಥಾಪಿಸಿದ್ದು, ಸದರಿ ಸಂಸ್ಥೆಯು ಉದ್ಯೋಗ ಆಧಾರಿತ ವೃತ್ತಿಪರ ಕೌಶಲ್ಯಗಳನ್ನು (Job Oriented Courses and Skills) ಸಮಾಜದಲ್ಲಿ ಆರ್ಥಿಕ ಹಾಗೂ ಸಾಮಾಜಿಕವಾಗಿ ಹಿಂದುಳಿದಿರುವ ಯುವಜನತೆಯ ಸಾಮರ್ಥ್ಯ ಹಾಗೂ ಗುಣಮಟ್ಟವನ್ನು ಅಭಿವೃದ್ಧಿಗೊಳಿಸುವಲ್ಲಿ ಕಾರ್ಯಪ್ರವೃತ್ತವಾಗಿದೆ ಎಂದು ICICI Foundation ಸಂಸ್ಥೆಯು ಉಲ್ಲೇಖಿತ ಪತ್ರದಲ್ಲಿ ತಿಳಿಸಿದ್ದು ಅನೇಕ ಉದ್ಯಮಗಳಲ್ಲಿ ಸುಮಾರು 1 ಲಕ್ಷಕ್ಕೂ ಹೆಚ್ಚು ಯುವಕ/ಯುವತಿಯರಿಗೆ ಉದ್ಯೋಗಾವಕಾಶಗಳು ದೊರೆಯುವಲ್ಲಿ ಮಹತ್ವದ ಪಾತ್ರವನ್ನು ವಹಿಸಿದೆ ಎಂದು ಉಲ್ಲೇಖಿಸಿದ್ದಾರೆ. ಮುಂದುವರೆದು, ICICI Academy ಯು 12 ವಾರಗಳ ಅವಧಿಯ ಕೌಶಲ್ಯಾಭಿವೃದ್ಧಿ ಶಿಕ್ಷಣವನ್ನು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಬೆಂಗಳೂರು ಹಾಗೂ ಮೈಸೂರು ನಗರಗಳೂ ಸೇರಿದಂತೆ ದೇಶಾದ್ಯಂತ ಒಟ್ಟು 24 ಕೇಂದ್ರಗಳಲ್ಲಿ **ಉಚಿತವಾಗಿ** ನೀಡುತ್ತಿರುವುದಾಗಿ ತಿಳಿಸಿದ್ದಾರೆ.

ಈ ಸಂಬಂಧ ಕಾಲೇಜು ಶಿಕ್ಷಣ ಇಲಾಖೆಯ ಮೂಲಕ ಸಮಾಜದಲ್ಲಿ ಹಿಂದುಳಿದ ವರ್ಗಗಳ ಯುವಜನತೆಯನ್ನು ಸಂಪರ್ಕಿಸಲು ಇಚ್ಛಿಸಿದ್ದು, ಬೆಂಗಳೂರಿನ ಕೌಶಲ್ಯ ಕೇಂದ್ರದಲ್ಲಿ 1,500 ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಹಾಗೂ ಮೈಸೂರಿನ ಕೇಂದ್ರದಲ್ಲಿ 400 ವಿದ್ಯಾರ್ಥಿನಿಯರಿಗೆ ತರಬೇತಿ ನೀಡುವ ಅವಕಾಶವಿರುವುದಾಗಿ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಉಚಿತ ತರಬೇತಿ ನೀಡಲು ಅನುಮತಿ ನೀಡಬೇಕೆಂದು ICICI Academy ಯು ಕೋರಿರುತ್ತದೆ.

ಈ ಹಿನ್ನೆಲೆಯಲ್ಲಿ, ವಿದ್ಯಾರ್ಥಿಗಳ Placement ಚಟುವಟಿಕೆಗಳಿಗೆ ಸಂಬಂಧಿಸಿದಂತೆ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಮತ್ತು ಹಳೆಯ ವಿದ್ಯಾರ್ಥಿಗಳ ಮಾಹಿತಿಯನ್ನು ಪಡೆಯಲು, ICICI Foundation ನ ಪ್ರತಿನಿಧಿಗಳು ಕಾಲೇಜುಗಳಿಗೆ ಭೇಟಿ ನೀಡಿದಾಗ, ಅವರೊಂದಿಗೆ ಸಹಕರಿಸಿ ಅವಶ್ಯವಿರುವ ಮಾಹಿತಿಯನ್ನು ನೀಡುವುದರ ಮೂಲಕ ಕೌಶಲ್ಯ ತರಬೇತಿಯಲ್ಲಿ ಹೆಚ್ಚಿನ ವಿದ್ಯಾರ್ಥಿಗಳು ದಿನನಿತ್ಯದ ಪಾಠಪ್ರವಚನಗಳಿಗೆ ಅಡಚಣೆಯಾಗದಂತೆ ಭಾಗವಹಿಸಲು ಉತ್ತೇಜಿಸುವಂತೆ ಈ ಮೂಲಕ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ಆಯುಕ್ತರು

ಇವರಿಗೆ,

ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪ್ರಾಂಶುಪಾಲರುಗಳಿಗೆ – ಅಗತ್ಯ ಕ್ರಮಕ್ಕಾಗಿ

**ಪ್ರತಿಯನ್ನು:**

1. ವೇಣುಗೋಪಾಲ್ ರಾವ್, ICICI Academy for skills 2ನೇ ಮಹಡಿ, ವೆಸ್ಟ್ ವಿಂಗ್, ಮೈತ್ರಿ ಸೆಂಟರ್, ಬೊಮ್ಮನಹಳ್ಳಿ, ಹೊಸೂರು ಮುಖ್ಯ ರಸ್ತೆ, ಬೆಂಗಳೂರು – 68
2. ಕಛೇರಿ ಪ್ರತಿ.